# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಗೀತಾ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹದ್ರಿಪುರ ಗ್ರಾಮಪಂಚಾಯತಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ D.O.No. Compt/Uplok/BD/448/2014/ARLO-2, ದಿನಾಂಕ: 18/22.02.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 04.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಶ್ರೀ. ಹನುಮಂತರಾಯಪ್ಪ. ವಿ. ಚುಂಚೇಗೌಡನಹೊಸಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು, ತಮ್ಮ ದೂರಿನಲ್ಲಿ (1) ಶ್ರೀಮತಿ ಗೀತಾ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹದ್ರಿಪುರ ಗ್ರಾಮಪಂಚಾಯತಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. ದೂರಿನ ಸಂಕ್ಷಿಪ್ತ ವಿವರಣೆ :-

ದೂರುದಾರರು ತಮ್ಮ ದೂರಿನಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕು ಹದ್ರಿಪುರ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿರುವ ರಾಮೇಶ್ವರ ಗ್ರಾಮದ ಸರ್ವೆ ನಂ. 15/6, 15/7 ಹಾಗೂ 15/8 ರ ಕೃಷಿ ಜಮೀನಿನಲ್ಲಿ ಕೋಳಿಫಾರಂ ನಡೆಸಲು ಎದುರುದಾರರು ಲೈಸೆನ್ಸ್ ಮತ್ತು ಎನ್.ಓ.ಸಿ. ನೀಡಿರುತ್ತಾರೆ. ಕೃಷಿ ಜಮೀನಿನಲ್ಲಿ ಈ ರೀತಿ ವಾಣಿಜ್ಯ ಉದ್ದೇಶಕ್ಕೆ ಲೈಸೆನ್ಸ್ ನೀಡುವ ಅಧಿಕಾರವಿಲ್ಲದಿದ್ದರೂ ಎದುರುದಾರರು ಕಾನೂನುಬಾಹಿರವಾಗಿ ಲೈಸೆನ್ಸ್ ನೀಡಿ ಕರ್ತವ್ಯಲೋಪವೆಸಗಿರುತ್ತಾರೆ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ದೂರು ಸಲ್ಲಿಸಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದಿ. 13.3.2013 ರಂದು ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಕೋಳಿಫಾರಂ ಹ್ಯಾಚರೀಸ್ ನಡೆಸಲು ಲೈಸೆನ್ಸ್ ಮತ್ತು ಎನ್.ಓ.ಸಿ ನೀಡಲು ಶ್ರೀಮತಿ ಶ್ವೇತ ಕೋಮಲ್ ಲಾಲ್ ಅವರು ಸಲ್ಲಿಸಿದ ಅರ್ಜಿಯ ಬಗ್ಗೆ ಗ್ರಾಮಪಂಚಾಯತಿ ಅಧ್ಯಕ್ಷ/ಉಪಾಧ್ಯಕ್ಷ ಹಾಗೂ ಸರ್ವ ಸದಸ್ಯರು ಚರ್ಚಿಸಿ ಗ್ರಾಮಪಂಚಾಯತಿ ಆದಾಯದ ಮೂಲವನ್ನು ಹೆಚ್ಚಿಸಿಕೊಳ್ಳುವ ಸಲುವಾಗಿ ಕೋಳಿಸಾಕಾಣಿಕೆಯು ಕೃಷಿ ಚಟುವಟಿಕೆಗೆ ಒಳಪಡುವುದರಿಂದ ಲೈಸೆನ್ಸ್ ಮತ್ತು ಎನ್.ಓ.ಸಿ ನೀಡಬಹುದೆಂದು ತೀರ್ಮಾನಿಸಿದ್ದಾರೆ. ಆಗ ಎದುರುದಾರರು ಕೋಳಿಫಾರಂ ಕೃಷಿ ಜಮೀನಿನಲ್ಲಿ ನಡೆಸಲು ಲೈಸೆನ್ಸ್ ಕೋರಿರುವುದರಿಂದ ಈ ರೀತಿ ಲೈಸೆನ್ಸ್ ನೀಡಲು ಬರುವುದಿಲ್ಲವೆಂದು ತಾವು ಮೌಖಿಕವಾಗಿ ತಿಳಿಸಿದರೂ ಸಹಾ ಗ್ರಾಮಪಂಚಾಯತಿಯವರು ಲೈಸೆನ್ಸ್ ನೀಡಲು ತೀರ್ಮಾನಿಸಿದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳು, ಮತ್ತು ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ತಹಶೀಲ್ದಾರ್ ಹಾಗೂ ಉಪವಿಭಾಗಾಧಿಕಾರಿಗಳು ಪರಿಶೀಲಿಸಿ, ವರದಿ ನೀಡಿರುತ್ತಾರೆ.

6. ಮಾನ್ಯ ತಹಶೀಲ್ದಾರ್ ಅವರ ವರದಿಯನ್ನು ಪರಿಶೀಲಿಸಿದಾಗ ಕೋಳಿ ಸಾಕಾಣಿಯು ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಕಾರಣ ಜನರಲ್ ಲೈಸೆನ್ಸ್ ಮತ್ತು ಎನ್.ಓ.ಸಿ. ನೀಡಲು ಸಾಮಾನ್ಯ ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯ ಕೈಗೊಂಡು ಆ ಪ್ರಕಾರ ಷರತ್ತುಗಳನ್ನು ವಿಧಿಸಿ ಲೈಸೆನ್ಸ್ ಮತ್ತು ಎನ್.ಓ.ಸಿ. ನೀಡಿರುತ್ತಾರೆ. ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪಿನಂತೆ ಕೋಳಿಸಾಕಾಣಿಕೆಯು ಕೃಷಿ ಕಸುಬಾಗಿದ್ದು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 199ರ ಪ್ರಕಾರ ಕೃಷಿ ತೆರಿಗೆ ನಿರ್ಧರಣೆಗೆ ಕೋಳಿಸಾಕಾಣಿಕೆಯು ಒಳಪಟ್ಟಿರುವುದಿಲ್ಲ. ಆದ್ದರಿಂದ ಒಂದು ವರ್ಷದ ಕಾಲಾವಧಿಗೆ ಲೈಸೆನ್ಸ್ ನೀಡಿರುತ್ತಾರೆಂದು ಅಭಿಪ್ರಾಯಪಟ್ಟಿರುತ್ತಾರೆ.

7. ಮಾನ್ಯ ಉಪವಿಭಾಗಾಧಿಕಾರಿಗಳು ತಮ್ಮ ವರದಿಯಲ್ಲಿ ದಿ. 12.9.2014 ರಂದು ತಹಶೀಲ್ದಾರ್ ದೊಡ್ಡಬಳ್ಳಾಪುರ ಅವರು ಸ್ಥಳತನಿಖೆ ಮಾಡಿದ್ದು, ಆಗ ಸರ್ವೆ ನಂ. 15/7 ಜಮೀನಿನಲ್ಲಿ ಶ್ರೀಮತಿ ರಾಜಲಕ್ಷ್ಮಿ ಅವರು ಕೋಳಿಫಾರಂ ನಡೆಸುತ್ತಿರುವುದರಿಂದ ಸ್ವಚ್ಚತೆ ಕಾಪಾಡುತಿಲ್ಲವೆಂದು ಸಾರ್ವಜನಿಕರಿಂದ ದೂರು ಬಂದಿದ್ದು, ಇರುತ್ತದೆ. ಇಲ್ಲಿ ಸ್ವಚ್ಚತೆ ಇಲ್ಲದ ಕಾರಣ ನೊಣದ ಹಾವಳಿ ಹೆಚ್ಚಾಗಿ ಸಾಂಕ್ರಾಮಿಕ ರೋಗ ಹರಡುವ ಸಾಧ್ಯತೆ ಇದ್ದು, ಸ್ವಚ್ಚತೆ ಕಾಪಾಡಲು ಕೋಳಿ ಫಾರಂ ಮಾಲೀಕರಿಗೆ ನೋಟೀಸು ನೀಡಲಾಗಿತ್ತು. ದಿ. 7.10.2014 ರಂದು ಶ್ರೀಮತಿ ರಾಜಲಕ್ಷ್ಮಿ ಅವರಿಗೆ ಅಂತಿಮ ನೋಟೀಸುಜಾರಿ ಮಾಡಿ 3 ದಿನಗಳ ಒಳಗಾಗಿ ಕೋಳಿಫಾರಂ ತೆರವುಗೊಳಿಸಲು ಸೂಚಿಸಲಾಗಿತ್ತು. ಆನಂತರ 70,000 ಕೋಳಿಗಳಲ್ಲಿ 35,000 ಕೋಳಿಗಳನ್ನು ಸ್ಥಳಾಂತರಿಸಲಾಗಿದೆಯೆಂದು ತಹಶೀಲ್ದಾರ್ ವರದಿ ನೀಡಿದ್ದರು.

8. ಕೃಷಿ ಜಮೀನಿನಲ್ಲಿ ಭೂಪರಿವರ್ತನೆ ಮಾಡಿಸದೆ ವಾಣಿಜ್ಯ ಉದ್ದೇಶಕ್ಕಾಗಿ ಕೋಳಿ ಫಾರಂ ನಡೆಸುತ್ತಿರುವುದರಿಂದ ಇವುಗಳನ್ನು ಅನಧಿಕೃತವೆಂದು ಪರಿಗಣಿಸಿ ತೆರವುಗೊಳಿಸಲು ದಿ. 23.2.2015 ರಂದು ತಿಳುವಳಿಕೆ ನೋಟೀಸು ನೀಡಲಾಗಿತ್ತು. ಆದ್ದರಿಂದ ರಾಜಸ್ವ ನಿರೀಕ್ಷಕರು ಹಾಗೂ ತಹಶೀಲ್ದಾರ್ ಅವರ ವರದಿಯ ಪ್ರಕಾರ ಈ ಕೋಳಿಸಾಗಾಣಿಕೆಯನ್ನು ಸ್ಥಗಿತಗೊಳಿಸಿದ್ದು, ಆದರೆ ಪುನಃ 2-3 ತಿಂಗಳಿಂದ ಪ್ರಾರಂಭಿಸಿರುತ್ತಾರೆಂದು ತಹಶೀಲ್ದಾರ್ ವರದಿ ಸಲ್ಲಿಸಿರುತ್ತಾರೆಂದು ಅಭಿಪ್ರಾಯಪಟ್ಟಿರುತ್ತಾರೆ.

9. ದಾಖಲೆಗಳನ್ನು ಹಾಗೂ ಮಾನ್ಯ ತಹಶೀಲ್ದಾರ್ ಹಾಗೂ ಉಪವಿಭಾಗಾಧಿಕಾರಿಗಳ ವರದಿಗಳನ್ನು ಪರಿಶೀಲಿಸಿದಾಗ ಕೃಷಿ ಜಮೀನಿನಲ್ಲಿ ಭೂಪರಿವರ್ತನೆ ಮಾಡದೆ ಕೋಳಿಪಾರಂ ನಡೆಸುತ್ತಿರುವುದು ಕಾನೂನುಬಾಹಿರವೆಂದು ಕಂಡುಬರುತ್ತದೆ. ಕೋಳಿಫಾರಂ ಇದು ವಾಣಿಜ್ಯ ಉದ್ದೇಶದ ಕೆಲಸವಾಗಿದ್ದು ಭೂಪರಿವರ್ತನೆ ಮಾಡದೆ ಹಾಗೂ ಅಧಿಕೃತ ಲೈಸೆನ್ಸ್ ಪಡೆಯದೆ ಈ ರೀತಿ ವಾಣಿಜ್ಯ ಚಟುವಟಿಕೆಗಳನ್ನು ನಡೆಸುತ್ತಿರುವುದು ಕಾನೂನುಬಾಹಿರವಾಗಿರುತ್ತದೆ. ಈ ಪ್ರಕರಣದಲ್ಲಿ ಹಾಜರುಪಡಿಸಿದ ಫೋಟೋ ಪರಿಶೀಲಿಸಿದಾಗ ಕೃಷಿ ಜಮೀನಿನಲ್ಲಿ ದೊಡ್ಡ ಪ್ರಮಾಣದಲ್ಲಿ ಪ್ರಾರಂಭಿಸಿ ವಾಣಿಜ್ಯ ಚಟುವಟಿಕೆ ನಡೆಸುತ್ತಿರುವುದು ಕಂಡುಬರುತ್ತದೆ.

10. ಕೋಳಿಫಾರಂ ತೆರೆಯುವ ಪೂರ್ವದಲ್ಲಿ ಅದರ ಮಾಲೀಕರು ದಿ.7.3.2013 ರಂದು ಲೈಸೆನ್ಸ್ ಹಾಗೂ ಎನ್.ಓ.ಸಿ ನೀಡುವಂತೆ ಅರ್ಜಿ ಸಲ್ಲಿಸಿದಾಗ ಗ್ರಾಮ ಪಂಚಾಯತಿಯಲ್ಲಿ ಸರ್ವಾನುಮತದಿಂದ ಲೈಸೆನ್ಸ್ ನೀಡಲು ತೀರ್ಮಾನಿಸಿರುತ್ತಾರೆಂದು ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಹೇಳಿರುತ್ತಾರೆ. ಆಗ ಎದುರುದಾರರು ಮೌಖಿಕವಾಗಿ ಈ ರೀತಿ ಲೈಸೆನ್ಸ್ ನೀಡಲು ಬರುವುದಿಲ್ಲವೆಂದು ಹೇಳಿದ್ದಾಗಿ ಆಕ್ಷೇಪಣೆಯಲ್ಲಿ ನಮೂದಿಸಿದ್ದು, ಆ ಬಗ್ಗೆ ಯಾವುದೇ ದಾಖಲೆಗಳು ಕಂಡುಬರುವುದಿಲ್ಲ. ಗ್ರಾಮಪಂಚಾಯಿತಿಯಲ್ಲಿ ತೀರ್ಮಾನಿಸಿದಾಗ ಎದುರುದಾರರು ತಕ್ಷಣವೇ ಕಾನೂನುಬಾಹಿರವಾಗಿ ಲೈಸೆನ್ಸ್ ನೀಡಲು ತೀರ್ಮಾನಿಸಲಾಗಿದೆಯೆಂದು ಮೇಲಾಧಿಕಾರಿಗಳಿಗೆ ವರದಿ ನೀಡಬಹುದಿತ್ತು. ಆದರೆ ಅವರು ಆ ಕ್ರಮಕೈಗೊಳ್ಳದೆ ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ ಎದುರುದಾರರ ವಿರುದ್ಧ ಕ್ರಮಕೈಗೊಳ್ಳುವಂತೆ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡುವುದು ಸಮಂಜಸವೆಂದು ಕಮಡುಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀಮತಿ ಗೀತಾ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹದ್ರಿಪುರ ಗ್ರಾಮಪಂಚಾಯತಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/188/ಗ್ರಾಪಂಕಾ/2017 ಬೆಂಗಳೂರು, ದಿನಾಂಕ–03–04–2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಗೀತಾ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹದ್ರಿಪುರ ಗ್ರಾಮಪಂಚಾಯತಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ 1 ರಿಂದ 63 ರವರೆಗೆ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
6. ಶ್ರೀಮತಿ ಗೀತಾ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹದ್ರಿಪುರ ಗ್ರಾಮಪಂಚಾಯತಿ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

–